**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.**

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ : 24.02.2023
ಪಾಟಿ ಸವಾಲು : 1 ಮತ್ತು 2 ನೇ ಪ್ರತಿವಾದಿ ಪರ ವಕೀಲರಿಂದ

ಸುಮಾರು 40 ವರ್ಷಗಳ ಹಿಂದೆ ನನ್ನ ಮದುವೆಯಾಗಿರುತ್ತದೆ. ನನ್ನ ಮಗಳನ್ನು 3 ನೇ ಪ್ರತಿವಾದಿಗೆ ಮದುವೆ ಮಾಡಿಕೊಡಲಾಗಿದೆ ಎಂದರೆ ಸರಿ. 1 ನೇ ವಾದಿಯ ಗಂಡ ಗುರುಲಿಂಗೇಗೌಡರ ತಮ್ಮ ಸಿದ್ದೇಗೌಡರ ಮಗಳನ್ನು 2 ನೇ ಪ್ರತಿವಾದಿಗೆ ಮದುವೆ ಮಾಡಿಕೊಡಲಾಗಿದೆ ಎಂದರೆ ಸರಿ. 1 ನೇ ವಾದಿಯ ಗಂಡ 1 ನೇ ಪ್ರತಿವಾದಿಯ ತಮ್ಮ ಎಂದರೆ ಸರಿ.

ದಾವಾ ಸ್ವತ್ತುಗಳು ನನ್ನ ತಂದೆಯ ಪಿತ್ರಾರ್ಜಿತ ಸ್ವತ್ತುಗಳಾಗಿರುತ್ತವೆ. ನನ್ನ ತಂದೆಯ ಜೊತೆ ಒಡಹುಟ್ಟಿದವರು 4 ಜನ. ಅವರ ಹೆಸರು ಜೋಗಿಗೌಡ, ಪುಟ್ಟಮಾದೇಗೌಡ, ಚುಂಚೇಗೌಡ, ಕಾಳೇಗೌಡ ಎಂಬುದಾಗಿದೆ. ಅವರನ್ನು ಈ ದಾವೆಯಲ್ಲಿ ಪಕ್ಷಗಾರರಾಗಿ ಸೇರ್ಪಡೆ ಮಾಡಿರುವುದಿಲ್ಲ ಎಂದರೆ ಸರಿ.

ನಾನು ಮದುವೆಯಾದ ನಂತರ ನನ್ನ ಗಂಡನ ಮನೆಯಲ್ಲಿ ವಾಸವಿದ್ದೇನೆ ಎಂದರೆ ಸರಿ. ನನ್ನ ತಂದೆ ಯಾವ ದಿನಾಂಕದಂದು ಮೃತರಾಗಿದ್ದಾರೆ ಎಂದು ನನಗೆ ನೆನಪಿಲ್ಲ. ನನ್ನ ತಂದೆ ಮೃತರಾದ ನಂತರ ನಾನು ಮಹದೇವಪುರ ಗ್ರಾಮಕ್ಕೆ ಬಂದಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆಗೆ ಸೇರಿದ ಎಲ್ಲಾ ಆಸ್ತಿಗಳನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸುಳ್ಳು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಸಾಕ್ಷಿಯ ಮುಂದುವರೆದ ಪಾಟಿ ಸವಾಲಿಗಾಗಿ ಸಮಯಾವಕಾಶ ಕೋರಿದ್ದು ನೀಡಲಾಗಿದೆ)

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.